ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 30-03-2021 ಪ್ರಶ್ನೆ ಸಂಖ್ಯೆ : 2096(2426)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ರವಿಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 30-03-2021

ಉತ್ತರಿಸುವ ಸಚಿವರು: ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು

ವಿಷಯ : ಕೆ.ಐ.ಎ.ಡಿ.ಬಿ ಮೂಲಕ ಜಮೀನು ಸ್ವಾಧೀನ ಕುರಿತು

(ಅ) ಕಳೆದ ಎರಡು ವರ್ಷಗಳಲ್ಲಿ ಕೆ.ಐ.ಎ.ಡಿ.ಬಿ ಮೂಲಕ ಎಷ್ಟು ಎಕರೆ ಭೂಮಿಯನ್ನು ಕೈಗಾರಿಕೆಗಳಿಗಾಗಿ ಸ್ವಾಧೀನ ಪಡಿಸಿಕೊಳ್ಳಲಾಗಿದೆ; (ಜಿಲ್ಲಾವಾರು, ವರ್ಷವಾರು ಮಾಹಿತಿ ನೀಡುವುದು)

(ಆ) ಕಳೆದ ಎರಡು ವರ್ಷಗಳಲ್ಲಿ ಕೈಗಾರಿಕೆಗಳಿಗಾಗಿ ವಶಪಡಿಸಿಕೊಳ್ಳಲಾದ ಭೂಮಿಯಿಂದ ಎಷ್ಟು ಎಕರೆ ಭೂಮಿಯನ್ನು ಭೂಮಿಯ ಮಾಲೀಕರಿಗೆ ಹಿಂತಿರುಗಿಸಲಾಗಿದೆ; ಯಾವ ಕಾರಣಕ್ಕೆ ಹಿಂತಿರುಗಿಸಲಾಗಿದೆ; (ಜಿಲ್ಲಾವಾರು ವಿವರದೊಂದಿಗೆ ಮಾಹಿತಿ ನೀಡುವುದು)

(ಇ) ಕೆ.ಐ.ಎ.ಡಿ.ಬಿ ಮೂಲಕ ಸ್ವಾಧೀನಪಡಿಸಿಕೊಳ್ಳಲಾದ ಭೂಮಿಗೆ ಪರ್ಯಾಯವಾಗಿ ಭೂ ಮಾಲೀಕರಿಗೆ ಯಾವ ರೀತಿಯ ಪರಿಹಾರ ವಿತರಿಸಲಾಗುತ್ತದೆ; ಕಳೆದ ಐದು ವರ್ಷಗಳಿಂದ ಭೂ ಮಾಲೀಕರಿಗೆ ಪರಿಹಾರ ಒದಗಿಸದಿರುವ ಎಷ್ಟು ಪ್ರಕರಣಗಳು ಬಾಕಿ ಇವೆ? (ಜಿಲ್ಲಾವಾರು ಮಾಹಿತಿ ನೀಡುವುದು)